ಸಾರ್ವಜನಿಕ ಶಿಕ್ಷಣ ಇಲಾಖೆ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
Karnataka School Quality Assessment & Accreditation Council
ಕೆ.ಎಸ್.ಇ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacbangalore@gmail.com & ksqaacbengaluru@gmail.com

ಸಂಖ್ಯೆ: K1/KSQAAC/5 ಮತ್ತು 8ನೇ ಮೌ/05/2022–23 ದಿನಾಂಕ: 18.03.2023

# ಪರಿಷ್ಕೃತ ಮಾರ್ಗಸೂಚಿ

**ವಿಷಯ:–** 2022–23 ನೇ ಸಾಲಿನಲ್ಲಿ 5 ಮತ್ತು 8ನೇ ತರಗತಿ ವಿದ್ಯಾರ್ಥಿಗಳಿಗೆ ಮೌಲ್ಯಾಂಕನ ಕಾರ್ಯವನ್ನು ನಡೆಸುವ ಬಗ್ಗೆ.

**ಉಲ್ಲೇಖ:–**
1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಕಛೇರಿ ಸುತ್ತೋಲೆ ಸಂಖ್ಯೆ: E-870867-DPII-PIOC7-2(PLM)/3/2022, ದಿನಾಂಕ: 12.12.2022.
2. ಸರ್ಕಾರಿ ಆದೇಶ ಸಂಖೆ: ಇಪಿ 89 ಪಿಬಿಎಸ್ 2023, ಬೆಂಗಳೂರು, ದಿನಾಂಕ: 17.02.2023
3. ಈ ಕಛೇರಿ ಮಾರ್ಗಸೂಚಿ ಸಂಖ್ಯೆ: K1/KSQAAC/5 ಮತ್ತು 8ನೇ ವಾ.ಪ/05/2022–23, ದಿನಾಂಕ: 27.02.2023
4. ಘನ ಉಚ್ಚ ನ್ಯಾಯಾಲಯದ Writ Appeal No.: WA293/2023

*~*~*~*

2022–23ನೇ ಸಾಲಿನಲ್ಲಿ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ 5 ಮತ್ತು 8 ನೇ ತರಗತಿ ವಿದ್ಯಾರ್ಥಿಗಳಿಗೆ ದಿನಾಂಕ: 27.03.2023 ರಿಂದ ಮೌಲ್ಯಾಂಕನವನ್ನು ನಡೆಸಲು ಘನ ಉಚ್ಚ ನ್ಯಾಯಾಲಯವು ಅವಕಾಶ ಕಲ್ಪಿಸಿದ್ದು, ಅದರಂತೆ 5 ನೇ ತರಗತಿ ವಿದ್ಯಾರ್ಥಿಗಳಿಗೆ **ದಿನಾಂಕ: 27.03.2023 ರಿಂದ 30.03.2023 ರವರೆಗೆ** ಮತ್ತು 8 ನೇ ತರಗತಿ ವಿದ್ಯಾರ್ಥಿಗಳಿಗೆ **ದಿನಾಂಕ: 27.03.2023 ರಿಂದ 01.04.2023 ರವರೆಗೆ** ಮೌಲ್ಯಾಂಕನವನ್ನು ನಡೆಸಲಾಗುತ್ತಿದೆ. ಈ ಸಂಬಂಧ ಪರಿಷ್ಕೃತ ವೇಳಾಪಟ್ಟಿಯನ್ನು ಮಂಡಲಿಯ ವೆಬ್‌ಸೈಟ್ https://kseab.karnataka.gov.in/ ನಲ್ಲಿ ದಿನಾಂಕ: 16.03.2023 ರಂದು ಪ್ರಕಟಿಸಲಾಗಿದೆ.

ಮುಂದುವರೆದು, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಆಯಾ ಶಾಲೆಗಳನ್ನೇ ಮೌಲ್ಯಾಂಕನ ಕೇಂದ್ರಗಳಾಗಿ ಪರಿಗಣಿಸಿದೆ. ಈ ಮೌಲ್ಯಾಂಕನವು ವಿದ್ಯಾರ್ಥಿಗಳ ಕಲಿಕಾ ಮಟ್ಟ, ಕಲಿಕಾ ನ್ಯೂನ್ಯತೆಗಳು, ಕಲಿಕಾ ಪ್ರಗತಿ ಹಾಗೂ ಯಾವ ವಿಷಯದ ಕಲಿಕೆಯಲ್ಲಿ ಎಷ್ಟು ಹಿನ್ನಡೆಯುಂಟಾಗಿದೆ ಎಂಬುದನ್ನು ತಿಳಿಯುವುದಾಗಿದೆ. ಈ ಮೌಲ್ಯಾಂಕನದಲ್ಲಿ ಯಾವುದೇ ವಿದ್ಯಾರ್ಥಿಯನ್ನು ಅನುತ್ತೀರ್ಣಗೊಳಿಸುವುದಿಲ್ಲ ಹಾಗೂ ಮುಂದಿನ ತರಗತಿಗೆ ತೇರ್ಗಡೆಗೊಳಿಸಲಾಗುವುದು.

ಮೌಲ್ಯಮಾಪನಕ್ಕೆ ಸಂಬಂಧಿಸಿದಂತೆ ಈ ಹಿಂದೆ 8ನೇ ತರಗತಿ ಮೌಲ್ಯಮಾಪನ ಕಾರ್ಯವನ್ನು ಅಂತರ್ ಬ್ಲಾಕ್ ಮಟ್ಟದಲ್ಲಿ (Inter block) ನಿರ್ವಹಿಸುವಂತೆ ತಿಳಿಸಲಾಗಿತ್ತು. ದಿನಾಂಕ: 31.03.2023 ರಿಂದ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ಪ್ರಾರಂಭವಾಗಲಿದ್ದು, ಒಂದು ಬ್ಲಾಕ್ ನಿಂದ ಮತ್ತೊಂದು ಬ್ಲಾಕ್‌ಗೆ ಪ್ರಶ್ನೆಪತ್ರಿಕೆಗಳನ್ನು ಸಾಗಾಣಿಕೆ ಮಾಡಿ ಮೌಲ್ಯಮಾಪನ ನಡೆಸಿ ಫಲಿತಾಂಶ ನೀಡಲು ಕಾಲಾವಕಾಶದ ಕೊರತೆಯಿರುವುದರಿಂದ 5 ಮತ್ತು 8 ಎರಡೂ ತರಗತಿಗಳ ಮೌಲ್ಯಮಾಪನ ಕಾರ್ಯವನ್ನು ತಾಲ್ಲೂಕು ಕೇಂದ್ರದಲ್ಲಿ ಅಂತರ್ ಕ್ಲಸ್ಟರ್‌ವಾರು (Inter cluster) ನಿರ್ವಹಿಸುವುದು. ಈ ಸಂಬಂಧ ಕೆಳಕಂಡಂತೆ ಕ್ರಮವಹಿಸುವುದು.

- ಆಯಾ ತರಗತಿಯ ಮೌಲ್ಯಾಂಕನ ಕಾರ್ಯ ಪೂರ್ಣಗೊಂಡ ನಂತರ ತಮ್ಮ ಬ್ಲಾಕ್ ಹಂತದ ಎಲ್ಲಾ ಶಾಲೆಗಳಿಂದ ಉತ್ತರಿಸಲಾದ ಎಲ್ಲಾ ವಿಷಯಗಳ ಬಂಡಲ್‌ಗಳನ್ನು ಪಡೆದು ತರಗತಿವಾರು ಪ್ರತ್ಯೇಕಿಸಿ ನಿಗದಿಪಡಿಸಲಾದ ಮೌಲ್ಯಮಾಪನ ಕೇಂದ್ರಕ್ಕೆ ರವಾನಿಸುವುದು.

- 5ನೇ ತರಗತಿ ಮೌಲ್ಯಮಾಪನ ಕಾರ್ಯವನ್ನು ದಿನಾಂಕ: 01.04.2023 ರಿಂದ 05.04.2023 ರೊಳಗೆ ಮತ್ತು 8ನೇ ತರಗತಿ ಮೌಲ್ಯಮಾಪನ ಕಾರ್ಯವನ್ನು ದಿನಾಂಕ: 02.04.2023 ರಿಂದ 07.04.2023 ರೊಳಗಾಗಿ (ರಜಾ ದಿನಗಳನ್ನು ಒಳಗೊಂಡಂತೆ) ಪೂರ್ಣಗೊಳಿಸುವುದು.
- ಮೌಲ್ಯಮಾಪನ ಕಾರ್ಯ ಪೂರ್ಣಗೊಂಡ ನಂತರ ಮರುದಿನವೇ ಉತ್ತರ ಪತ್ರಿಕೆಗಳನ್ನು ಸಂಬಂಧಿಸಿದ ಶಾಲೆಗಳಿಗೆ ತಲುಪಿಸುವುದು.
- ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರು / ಪ್ರಾಂಶುಪಾಲರು ವಿದ್ಯಾರ್ಥಿಗಳು ಗಳಿಸಿರುವ ಅಂಕಗಳನ್ನು ಕ್ರೋಢೀಕರಿಸಿ ಗ್ರೇಡ್‌ಗಳಿಗೆ ಪರಿವರ್ತಿಸಿ ವಿದ್ಯಾರ್ಥಿಗಳಿಗೆ ಫಲಿತಾಂಶವನ್ನು ನೀಡುವುದು.

ಈ ಮೇಲ್ಕಂಡ ಅಂಶಗಳನ್ನು ಹೊರತುಪಡಿಸಿ ಉಳಿದಂತೆ ದಿನಾಂಕ: 27.02.2023 ರ ಮಾರ್ಗಸೂಚಿಯಂತೆ ಕ್ರಮವಹಿಸಿ ಮೌಲ್ಯಾಂಕನವನ್ನು ಯಶಸ್ವಿಗೊಳಿಸುವಂತೆ ಈ ಮೂಲಕ ತಿಳಿಸಿದೆ.

20/3/2023

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ,**

1) ಎಲ್ಲಾ ಜಿಲ್ಲೆಯ ಉಪನಿರ್ದೇಶಕರು (ಆಡಳಿತ) ಹಾಗೂ ಉಪನಿರ್ದೇಶಕರು (ಅಭಿವೃದ್ಧಿ) ರವರಿಗೆ.
2) ರಾಜ್ಯದ ಎಲ್ಲಾ 5 ಮತ್ತು 8ನೇ ತರಗತಿ ಮೌಲ್ಯಾಂಕನದ ಜಿಲ್ಲಾ ಹಾಗೂ ತಾಲ್ಲೂಕು ನೋಡಲ್ ಅಧಿಕಾರಿಗಳಿಗೆ.
3) ಎಲ್ಲಾ ಬ್ಲಾಕ್‌ಗಳ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ.
4) ಎಲ್ಲಾ ಬ್ಲಾಕ್‌ಗಳ ಕ್ಷೇತ್ರಸಮನ್ವಯಾಧಿಕಾರಿಗಳಿಗೆ.
5) ಎಲ್ಲಾ ಬಿ.ಆರ್.ಪಿ ಮತ್ತು ಸಿ.ಆರ್.ಪಿ ಗಳಿಗೆ.
6) ರಾಜ್ಯ ಪಠ್ಯಕ್ರಮದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಮುಖ್ಯ ಶಿಕ್ಷಕರಿಗೆ ಕ್ಷೇತ್ರಶಿಕ್ಷಣಾಧಿಕಾರಿಗಳ ಮೂಲಕ.
7) ಕಛೇರಿ ಪ್ರತಿ.

**ಪ್ರತಿಯನ್ನು ಗೌರವ ಪೂರ್ವಕವಾಗಿ ಮಾಹಿತಿಗಾಗಿ,**

1) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರಿಗೆ.
2) ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ.
3) ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ರವರಿಗೆ.
4) ಮಾನ್ಯ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ, ಬೆಂಗಳೂರು ರವರಿಗೆ.
5) ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗ ಮತ್ತು ಧಾರವಾಡ ರವರಿಗೆ.
6) ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ.
7) ನಿರ್ದೇಶಕರು, ಪ್ರೌಢಶಿಕ್ಷಣ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ.
8) ನಿರ್ದೇಶಕರು, ಭಾಷಾ ಅಲ್ಪಸಂಖ್ಯಾಂತರ ನಿರ್ದೇಶನಾಲಯ, ಬೆಂಗಳೂರು ರವರಿಗೆ.
9) ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಬೆಂಗಳೂರು ರವರಿಗೆ.
10) ಕಾರ್ಯನಿರ್ವಾಹಕ ನಿರ್ದೇಶಕರು, ವಸತಿ ಶಾಲೆಗಳ ಸಂಘ, ಬೆಂಗಳೂರು ರವರಿಗೆ.